ಡಾ॥ ಶೈಲೇಂದ್ರ ಕೆ. ಬೆಲ್ದಾಳೆ

ಕರ್ನಾಟಕ ಸರ್ಕಾರವು ತನ್ನ ಆದೇಶದ ಪತ್ರ ಸಂಖ್ಯೆ: ಡಿಡಿಡಿ 27/2020 ದಿನಾಂಕ 25.11.2020ರ ಮೂಲಕ ಡಾ॥ ಶೈಲೇಂದ್ರ ಕೆ. ಬೆಲ್ದಾಳೆ ರವರನ್ನು ನಿಗಮದ ಅಧ್ಯಕ್ಷರನ್ನಾಗಿ ನೇಮಿಸಿರುತ್ತದೆ. ಅದರಂತೆ, ಸದರಿಯವರು ದಿನಾಂಕ 27.11.2020ರಂದು ಅಧಿಕಾರ ವಹಿಸಿಕೊಂಡಿರುತ್ತಾರೆ.

ಸದರಿಯವರು ಭಾರತೀಯ ಜನತಾ ಪಕ್ಷದಲ್ಲಿ ಹಲವಾರು ವರ್ಷಗಳಿಂದ ವಿವಿಧ ಹುದ್ದೆಗಳನ್ನು ಅಲಂಕರಿಸಿ ಜವಾಬ್ದಾರಿಗಳನ್ನು ನಿಭಾಯಿಸಿದ್ದಾರೆ. ಪಕ್ಷದಲ್ಲಿ ಖಜಾಂಚಿಯಾಗಿ, ಉಪಾಧ್ಯಕ್ಷರಾಗಿ, ಜಿಲ್ಲಾಧ್ಯಕ್ಷರಾಗಿ ಸುಮಾರು 15 ವರ್ಷಗಳಿಂದ ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತಾ ಬಂದಿದ್ದಾರೆ. ಭಾರತೀಯ ಜನತಾ ಪಕ್ಷದ ಯುವ ಮೋರ್ಚಾ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿರುತ್ತಾರೆ. 2010–2016ರಲ್ಲಿ ಜಿಲ್ಲಾ ಪಂಚಾಯತ್ ಸದಸ್ಯರಾಗಿ ಆಯ್ಕೆಗೊಂಡಿರುತ್ತಾರೆ ಹಾಗೂ ಆರೋಗ್ಯ ಮತ್ತು ಶಿಕ್ಷಣ ಸಮಿತಿಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿರುತ್ತಾರೆ. 2013 ಮತ್ತು 2018ನೇ ಸಾಲಿನಲ್ಲಿ ವಿಧಾನಸಭೆ ಚುನಾವಣೆಗೆ ಭಾರತೀಯ ಜನತಾ ಪಕ್ಷದಿಂದ ಸ್ಪರ್ಧಿಸಿದ್ದಾರೆ.

ಡಾ॥ ಶೈಲೇಂದ್ರ ಬೆಲ್ದಾಳೆ ರವರು ಮೂಲತಃ ಹೋಮಿಯೋಪಥಿ ಔಷಧ ವೈದ್ಯರಾಗಿ ದೀರ್ಘಕಾಲ ಸೇವೆ ಸಲ್ಲಿಸಿದ್ದಾರೆ. ಕರ್ನಾಟಕ ರಾಜ್ಯದ ಮೂಲಸೌಲಭ್ಯ ಮತ್ತು ಕೈಗಾರಿಕೆ ಬೆಳವಣಿಗೆ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಲು ಹಲವಾರು ಆಶಯಗಳನ್ನು ಹಾಗೂ ಗುರಿಗಳನ್ನು ಹೊಂದಿರುತ್ತಾರೆ.